



ಅರುಣ ಪಿ. ಭಟ್ಟ

## ವಾರಭವಿಷ್ಯ: 26.03.2026ರಿಂದ 01.04.2026ರವರೆಗೆ




ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚುಗಳನ್ನು ಸರಿದೂಗಿಸುತ್ತದೆ. ನಿಮ್ಮ ಅಭಿಪ್ರಾಯಗಳನ್ನು ಇತರರ ಮೇಲೆ ಹೇರಬೇಡಿ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ನಿಮ್ಮ ಸ್ಪರ್ಧಾತ್ಮಕ ಸ್ವಭಾವ ನೀವು ಸದಾ ಮುಂದೆ ಉಳಿಯಲು ಸಹಾಯ ಮಾಡುತ್ತದೆ. ಶುಭದಿನ: 27. ಶ್ರೀದುರ್ಗಾ ಆರಾಧನೆ ಮಾಡಿರಿ.




ವಾರದ ಶುರುವಿನಿಂದಲೇ ವೃತ್ತಿಪರ ಜೀವನದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಅದರ ಫಲಿತವಾಗಿ ಸರಿಯಾದ ಸಮಯಕ್ಕೆ ಕೆಲಸ ಕಾರ್ಯಗಳು ಪೂರ್ಣಗೊಳ್ಳಲಿವೆ. ಮಕ್ಕಳಿಗೆ ಸಹಾಯ ಮಾಡಲಿದ್ದೀರಿ. ಕುಟುಂಬದಲ್ಲಿ ಹಲವು ಬದಲಾವಣೆ ತರುವ ಮೂಲಕ ಸಂತೋಷ ಉಂಟು ಮಾಡಲಿದ್ದೀರಿ. ಹೆಚ್ಚು ತಾಳ್ಮೆಯಿಂದ ಹಾಗೂ ಗಮನ ಕೊಟ್ಟು ಕೆಲಸ ಮಾಡಿ. ಶುಭದಿನ: 26. ಹನುಮಾನ್ ಚಾಲೀಸ್ ಓದಿರಿ.




ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ. ನಿಮ್ಮ ಕುಟುಂಬದ ಬೆಂಬಲವೂ ದೊರೆಯುತ್ತದೆ. ಆದಾಯ ಮೂಲಗಳಿಂದ ಉತ್ತಮ ವರಮಾನ ಇರುತ್ತದೆ. ಇದರಿಂದ ನಿಮ್ಮ ಆತ್ಮವಿಶ್ವಾಸ ಹೆಚ್ಚಾಗುತ್ತದೆ ಸಂತೋಷ ಕೂಡ ಉಂಟಾಗುತ್ತದೆ. ನಿಮ್ಮ ಜೀವನಶೈಲಿ ಮತ್ತಷ್ಟು ಉತ್ತಮಗೊಳ್ಳುತ್ತದೆ. ಪ್ರಮುಖ ವಸ್ತುವೊಂದರ ಖರೀದಿ ಮಾಡುತ್ತೀರಿ. ಶುಭದಿನ: 28. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸರಿಯಾದ ದಿಕ್ಕಿನಲ್ಲಿ ಬಳಕೆ ಮಾಡಿಕೊಳ್ಳುತ್ತೀರಿ. ಮುಂಬರುವ ದಿನಗಳಲ್ಲಿ ಅನುಕೂಲ ಆಗುತ್ತದೆ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಕುಟುಂಬದ ಸದಸ್ಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಸೋದರರ ಜತೆಗೆ ಅತಿ ಮುಖ್ಯವಾದ ವಿಚಾರಗಳನ್ನು ಚರ್ಚೆ ಮಾಡುತ್ತೀರಿ. ವಾರದ ಕೊನೆ ಭಾಗದಲ್ಲಿ ಕೆಲಸದಲ್ಲಿ ಪ್ರಗತಿ ಇದೆ. ಶುಭದಿನ: 29. ವಿಷ್ಣು ಸಹಸ್ರನಾಮ ಓದಿರಿ.




ದೂರದ ಪ್ರದೇಶಗಳಿಗೆ ತೆರಳುವ ಸಂಭವ. ವ್ಯಾಜ್ಯಗಳು ಕೋರ್ಟ್‌ನಲ್ಲಿ ಇದ್ದರೆ ಅವುಗಳನ್ನು ನಿವಾರಿಸಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ಶ್ರಮ ಪಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಆಲೋಚನೆ ಮಾಡುತ್ತೀರಿ. ಈ ಮಧ್ಯೆ ನಿಮ್ಮ ವೈಯಕ್ತಿಕ ಸಂಬಂಧದಲ್ಲಿ ಕೆಲ ಗೊಂದಲ ಏರ್ಪಡುತ್ತವೆ. ಶುಭದಿನ: 30. ಕಾಲಭೈರವನ ಸೇವೆ ಮಾಡಿರಿ.




ಸಂಬಂಧಿಕರ ಭೇಟಿ ಮಾಡುವ ಸಾಧ್ಯತೆ ಇದೆ. ಹೆಚ್ಚಿನ ಖರ್ಚು ಆಗಲಿದೆ. ಉದ್ಯೋಗದಲ್ಲಿ ಒತ್ತಡ ಹೆಚ್ಚಾಗುವ ಸಾಧ್ಯತೆಯಿದೆ. ಕುಟುಂಬದ ವಿಚಾರದಲ್ಲಿ ತೆಗೆದುಕೊಳ್ಳಬೇಕಾದ ನಿರ್ಧಾರಕ್ಕೆ ಪೂರಕವಾಗಿ ಅವಕಾಶಗಳು ದೊರೆಯಲಿವೆ. ಭೂಮಿ ಖರೀದಿಗೆ ಮನಸ್ಸು ಮಾಡುತ್ತೀರಿ. ನಿಮ್ಮ ಶ್ರಮದ ಹಣವು ಇನ್ನೊಬ್ಬರ ಕೈನಲ್ಲಿ ಸಿಲುಕಿಕೊಳ್ಳುತ್ತದೆ. ಶುಭದಿನ: 27. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಣ ಮಾಡಿರಿ.




ವೃತ್ತಿಪರ ಜೀವನದಲ್ಲಿ ಉತ್ತಮವಾದ ಅವಕಾಶಗಳು ದೊರೆಯಲಿವೆ. ಕೌಟುಂಬಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದೆ. ವ್ಯವಹಾರಗಳಲ್ಲಿ ಪ್ರಗತಿ ಕಾಣಿಸುತ್ತದೆ. ನಿಮ್ಮ ಆರೋಗ್ಯ ಕೂಡ ಉತ್ತಮವಾಗಿರುತ್ತದೆ. ಮಕ್ಕಳ ಪ್ರಗತಿ ನಿಧಾನ ಆಗುವುದರಿಂದ ಚಿಂತೆಗೆ ಕಾರಣವಾಗುತ್ತದೆ. ತಂತ್ರಜ್ಞಾನ ಕ್ಷೇತ್ರಕ್ಕೆ ಸಂಬಂಧಿಸಿದವರಿಗೆ ಉತ್ತಮವಾದ ಪ್ರಗತಿ ಕಾಣಲಿದೆ. ಶುಭದಿನ: 28. ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.




ನಿಮಗೆ ವಹಿಸಿದ ಕೆಲಸಗಳನ್ನು ಪೂರೈಸಲು ಯಶಸ್ವಿ ಆಗುತ್ತೀರಿ. ಸಿಬ್ಬಂದಿಯ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಸಫಲರಾಗುತ್ತೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ನೀಡಿದ ಸಂದರ್ಶನಗಳು ಯಶಸ್ಸು ಕಾಣುವ ಸಾಧ್ಯತೆಗಳಿವೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯ ಭಾವನೆಗಳಿಗೂ ಗೌರವ ನೀಡಿ. ದೂರದ ಪ್ರದೇಶಗಳಿಗೆ ಭೇಟಿ ನೀಡಬೇಕಾಗುತ್ತದೆ. ಶುಭದಿನ: 29. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಕಾಣಲಿದ್ದೀರಿ. ಬಾಹ್ಯ ಚಟುವಟಿಕೆಗಳು ಈ ಹಿಂದಿನಂತೆಯೇ ನಡೆಯುತ್ತವೆ. ಈ ಸಮಸ್ಯೆಗಳಿಗೆ ಆಸ್ಪತ್ರೆಗೆ ಹೋಗುವುದು ಅನಿವಾರ್ಯ ಆಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯಿಂದ ಕೆಲ ಗೊಂದಲ, ಆತಂಕ ಸೃಷ್ಟಿ ಆಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಗ್ರಹ ಸ್ಥಿತಿಗಳು ನಿಮಗೆ ಅನುಕೂಲಕರವಾಗಿ ಪರಿಣಮಿಸುತ್ತದೆ. ಶುಭದಿನ: 28. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ವಾರದ ಶುರುವಿನಿಂದಲೇ ನಿಮ್ಮ ಅದೃಷ್ಟ ಚೆನ್ನಾಗಿದೆ. ನಿಮ್ಮ ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಹಿಂದೆಂದಿಗಿಂತಲೂ ಹೆಚ್ಚು ಚಟುವಟಿಕೆಯಿಂದ ಕಾಣಿಸಿಕೊಳ್ಳುತ್ತೀರಿ. ವಾಹನಗಳ ನಿರ್ವಹಣೆಯು ನಿರಂತರ ಚಿಂತೆಗೆ ಕಾರಣವಾಗುತ್ತದೆ. ತಂದೆಯ ಜತೆಗೆ ಮನಸ್ತಾಪ ಉದ್ಭವಿಸಬಹುದು. ನಿಮ್ಮ ಸಾಮರ್ಥ್ಯದ ಸದುಪಯೋಗ ಮಾಡಿಕೊಳ್ಳಬೇಕು. ಶುಭದಿನ: 30. ಮಾರುತಿಗುಡಿಗೆ ಮುಖ ನೋಡಿದ ಎಣ್ಣೆ ನೀಡಿ.




ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುತ್ತದೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ಜೀವನವು ಸಂತೋಷವಾಗಿ ಇರುತ್ತದೆ. ಉದ್ಯಮಿಗಳಾಗಿದ್ದಲ್ಲಿ ದೀರ್ಘಾವಧಿ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಪಿತ್ರಾರ್ಜಿತ ಆಸ್ತಿ ವಿಚಾರವಾಗಿ ಬಿಕ್ಕಟ್ಟು ಉದ್ಭವಿಸುತ್ತದೆ. ಕಾನೂನು ಕ್ರಮಗಳನ್ನು ತೆಗೆದುಕೊಳ್ಳಬೇಕಾಗಬಹುದು. ದಾನ ಧರ್ಮ ಮಾಡುವ ಮನಸ್ಸಾಗುತ್ತದೆ. ಶುಭದಿನ: 29. ಸುಬ್ರಹ್ಮಣ್ಯ ಜಪ ಮಾಡಿರಿ.




ನಿಮ್ಮ ಕೆಲಸ ಕಾರ್ಯಗಳನ್ನು ಇನ್ನಷ್ಟು ಒಪ್ಪ ಮಾಡಲು ಇನ್ನೂ ಹೆಚ್ಚಿನ ಶ್ರಮ ಹಾಕುತ್ತೀರಿ. ಕೆಲಸದ ವೇಗವನ್ನು ಮತ್ತಷ್ಟು ಹೆಚ್ಚಿಸಿಕೊಳ್ಳುವಂತೆ ಸೂಚನೆ ನೀಡುತ್ತಾರೆ. ಕೆಲವು ವ್ಯವಹಾರಗಳನ್ನು ಮಾಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕಾಗುತ್ತದೆ. ಭೂಮಿ ಖರೀದಿ ವಿಚಾರದಲ್ಲಿ ಬಿಕ್ಕಟ್ಟುಗಳು ಇದ್ದಲ್ಲಿ ಅವು ನಿವಾರಣೆ ಆಗುತ್ತವೆ. ಇದರಿಂದ ನಿಮಗೆ ಅನುಕೂಲ ಆಗಲಿದೆ. ಶುಭದಿನ: 28. ನವದುರ್ಗಾ ಆರಾಧನೆ ಮಾಡಿರಿ.